**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ**
**ನ್ಯಾಯಾಲಯ, ಗುಂಡ್ಲುಪೇಟೆ**
**ಜಾರಿ ಅರ್ಜಿ ಸಂಖ್ಯೆ 20/2025**

**ಪಿಡಬ್ಲ್ಯೂ – 1**

**ಸಾಕ್ಷಿಯು ದಿಃ 06.02.2026 ರಂದು ನ್ಯಾಯಾಲಯದಲ್ಲಿ ಹಾಜರಿದ್ದು ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ : ಡಿಕ್ರಿದಾರರ ಪರ ವಕೀಲರಿಂದ**

ನಾನು ಡಿಕ್ರಿದಾರರ ಜಿ.ಪಿ.ಎ ಧಾರಕನಾಗಿದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಯಿಸಿ ತಿಳಿದುಕೊಂಡಿರುತ್ತೇನೆ ಹಾಗೂ ಈ ಪ್ರಮಾಣ ಪತ್ರದಲ್ಲಿ ಇರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣ ಮಾಡಿ ಸಹಿ ಮಾಡಿರುತ್ತೇನೆ. ನಾನು ಈ ಕೆಳಕಂಡ ದಾಖಲಾತಿಗಳನ್ನು ಹಾಜರು ಮಾಡಿರುತ್ತೇನೆ. ಅವುಗಳನ್ನು ನಿಶಾನೆಯಾಗಿ ಗುರುತಿಸುವಂತೆ ಕೋರುತ್ತೇನೆ.

ಡಿಕ್ರಿದಾರರು ನನಗೆ ನೀಡಿರುವ ಸಾಮಾನ್ಯ ಅಧಿಕಾರ ಪತ್ರವನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ 1 ಎಂದು ಗುರ್ತಿಸಲಾಯಿತು. ಓಎಸ್ 279/2017 ರ ತಿರ್ಪು ಮತ್ತು ಡಿಕ್ರಿಯ ದೃಡೀಕೃತ ನಕಲುಗಳನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ನಿಪಿ 2 ಮತ್ತು 3 ಎಂದು, ಪೊಲೀಸರು ನೀಡಿರುವ ಹಿಂಬರಹ ಹಾಜರುಪಡಿಸಿರುತ್ತೇನೆ ಅದನ್ನು ನಿಪಿ 4 ಎಂದು, ಪೊಲೀಸರು ನೀಡಿರುವ ಸ್ವೀಕೃತಿಯನ್ನು

ಹಾಜರುಪಡಿಸಿರುತ್ತೇನೆ ಅದನ್ನು ನಿಪಿ 5 ಎಂದು, ಸಿಡಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ 6 ಎಂದು ಗುರ್ತಿಸಲಾಯಿತು.

**ಪಾಟೀ ಸವಾಲು: ತೀರ್ಪುಋಣಿ ಪರ ವಕೀಲರು ಗೈರು ಹಾಜರಿದ್ದು ತೀರ್ಪುಋಣಿ ಸಮಯ ಕೋರಿದ್ದು ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ದೀಪು ಎಂ.ಟಿ.)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಗುಂಡ್ಲುಪೇಟೆ